## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸಿ.ಶ್ರೀನಿವಾಸ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ಇವರನ್ನು ಅಮಾನತ್ತುಗೊಳಿಸುವ ಬಗ್ಗೆ.

**ಓದಲಾಗಿದೆ:-** ಮು.ಕಾ.ನಿ.ಜಿ.ಪಂ.ಚಿಕ್ಕಬಳ್ಳಾಪುರ ಇವರ ಪತ್ರ ಸಂಖ್ಯೆ: ಜಿ.ಪಂ.ಜಿ/ಆಡಳಿತ/ಕಾ.ನಿ.ಅ/ತಾ.ಪಂ.ಜಿ/ಅಮಾನತ್ತು/ಸಿ.ಆರ್/17-18, ದಿನಾಂಕ:11.08.2017.

****

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಸ್ತಾವನೆ ದಿನಾಂಕ:11.08.2017ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿ, ಚಿಂತಾಮಣಿ ನಗರದ ತಾಲ್ಲೂಕು ಪಂಚಾಯತಿ ಭವನ (ಸಾಮರ್ಥ್ಯ ಸೌಧ ಕಟ್ಟಡ) ನಿರ್ಮಾಣ ಉಳಿಕೆ ಕಾಮಗಾರಿಯ 02, 03 ನೇ ಅತಸ್ತು ರೂ.330.00ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಟ್ಟಡಕ್ಕೆ ಕೆಲವೊಂದು ಷರತ್ತಿಗೊಳಪಟ್ಟಿ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದ್ದು, ಸದರಿ ಕಾಮಗಾರಿಯ ಅಂದಾಜು ಪಟ್ಟಿಗಳಿಗೆ ತಾಂತ್ರಿಕವಾಗಿ ಪರಿಶೀಲಿಸಿ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ರವರು ಸಹ ದಿನಾಂಕ:07.02.2017ರಂದು ಮಂಜೂರಾತಿಯನ್ನು ನೀಡಿರುತ್ತಾರೆ.

ಈ ಬಗ್ಗೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ ರವರು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ಇವರಿಗೆ ಸದರಿ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸುವಂತೆ ಜಿಲ್ಲಾ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಿರುವಂತೆ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಬೇಕಾಗಿರುವುದರಿಂದ ರೂ.330.00ಲಕ್ಷಗಳ ಅನುದಾನವನ್ನು ಠೇವಣಿ ರೂಪದಲ್ಲಿ ಸಲ್ಲಿಸುವಂತೆ ಕೋರಿದಾಗ್ಯೂ ಸದರಿ ಅನುದಾನವನ್ನು ಕಾರ್ಯನಿರ್ವಾಹಕ ಅಧಿಕಾರಿ, ಚಿಂತಾಮಣಿ ರವರು ಬಿಡುಗಡೆ ಮಾಡದಿರುವ ಕಾರಣ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ರವರಿಗೆ ದಿನಾಂಕ: 20.02.2017ರಲ್ಲಿ ಕೋರಿರುತ್ತಾರೆ. ಈ ಹಿನ್ನಲೆಯಲ್ಲಿ ಲಭ್ಯವಿರುವ ಅನುದಾನ ರೂ.330.00ಲಕ್ಷಗಳನ್ನು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಚಿಕ್ಕಬಳ್ಳಾಪುರ ಇವರಿಗೆ ಪಾವತಿಸಲು ಕ್ರಮ ವಹಿಸುವಂತೆ ದಿ:01.03.2017ರ ಪತ್ರದಲ್ಲಿ ಸೂಚಿಸಿದಾಗ್ಯೂ ಸದರಿ ಅನುದಾವನ್ನು ವರ್ಗಾವಣೆ ಮಾಡಲು ಕ್ರಮ ವಹಿಸದೇ ಇದ್ದ ಹಿನ್ನಲೆಯಲ್ಲಿ ಮತ್ತೊಮ್ಮೆ ಸದರಿ ಅನುದಾನವನ್ನು ವರ್ಗಾವಣೆ ಮಾಡಲು ಕಾರ್ಯನಿರ್ವಹಕ ಅಧಿಕಾರಿಗೆ ಸೂಕ್ತ ನಿರ್ದೇಶನ ನೀಡುವಂತೆ ದಿ:06.04.2017ರ ಪತ್ರದಲ್ಲಿ ಕಾರ್ಯಪಾಲಕ ಅಭಿಯಂತರರು ಕೋರಿರುತ್ತಾರೆ.

ಮುಂದುವರೆಯುತ್ತ, ಸದರಿ ಕಾಮಗಾರಿಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ತ್ರೈಮಾಸಿಕ ಕೆ.ಡಿ.ಪಿ ಸಭೆಯಲ್ಲಿ ಚರ್ಚಿಸಲಾಗಿ ಶ್ರೀ ಶ್ರೀನಿವಾಸ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ರವರು ಸಭೆಗೆ ಸುಳ್ಳು ಮಾಹಿತಿಯನ್ನು ನೀಡಿರುತ್ತಾರೆ.

ಈ ಹಿನ್ನೆಲೆಯಲ್ಲಿ ಶ್ರೀ ಸಿ. ಶ್ರೀನಿವಾಸ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ರವರು ಸರ್ಕಾರದ ಕಾರ್ಯಕ್ರಮಗಳನ್ನು ನಿಗಧಿತ ಅವಧಿಯಲ್ಲಿ ಅನುಷ್ಠಾನಗೊಳಿಸಲು ಸಂಪೂರ್ಣವಾಗಿ ವಿಫಲಾಗಿರುವುದು ಹಾಗೂ ಸರ್ಕಾರದ ಅನುದಾನವನ್ನು ನಿಗಧಿತ ಅವಧಿಯಲ್ಲಿ ವೆಚ್ಚ ಮಾಡದೇ ಹಾಗೂ ಮೇಲಾಧಿಕಾರಿಗಳ ಆದೇಶವನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿ ಅಸಭ್ಯತೆಯಿಂದ ವರ್ತಿಸಿ ಕರ್ತವ್ಯ ಲೋಪವೆಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಅಮಾನತ್ತುಗೊಳಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರು ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯಲ್ಲಿ ಪ್ರಸ್ತಾಪಿಸಿರುವಂತೆ ಶ್ರೀ ಸಿ.ಶ್ರೀನಿವಾಸ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ರವರು ಚಿಂತಾಮಣಿ ನಗರದ ತಾಲ್ಲೂಕು ಪಂಚಾಯತಿ ಭವನ (ಸಾಮರ್ಥ್ಯ ಸೌಧ ಕಟ್ಟಡ) ನಿರ್ಮಾಣ ಉಳಿಕೆ ಕಾಮಗಾರಿಯ 02, 03 ನೇ ಅಂತಸ್ತು ರೂ.330.00ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಟ್ಟಡದ ನಿರ್ಮಾಣಕ್ಕೆ ಸರ್ಕಾರದ ಆದೇಶದಂತೆ ಸದರಿ ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಅನುಷ್ಠಾನಗೊಳಿಸಲು ಸದರಿ ಕಾಮಗಾರಿಯ ಅನುದಾನವನ್ನು ಕಾರ್ಯಪಾಲಕ ಅಭಿಯಂತರರು, ತಾಲ್ಲೂಕು ಪಂಚಾಯತಿ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ ಇವರಿಗೆ ವರ್ಗಾಯಿಸದೇ ಹಾಗೂ ಮೇಲಾಧಿಕಾರಿಗಳ ಆದೇಶವನ್ನು ಪರಿಪಾಲಿಸದೇ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪವೆಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು ನಿಯಮ 1957ರ ನಿಯಮ 10(1)(ಡಿ)ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಅಮಾನತ್ತುಗೊಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 112 ವಿಸೇಬಿ 2017 ಬೆಂಗಳೂರು ದಿನಾಂಕ:11-08-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಸಿ.ಶ್ರೀನಿವಾಸ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ರವರು ಚಿಂತಾಮಣಿ ನಗರದ ತಾಲ್ಲೂಕು ಪಂಚಾಯತಿ ಭವನ (ಸಾಮರ್ಥ್ಯ ಸೌಧ ಕಟ್ಟಡ) ನಿರ್ಮಾಣ ಉಳಿಕೆ ಕಾಮಗಾರಿಯ 02, 03 ನೇ ಅಂತಸ್ತು ರೂ.330.00ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಟ್ಟಡದ ನಿರ್ಮಾಣಕ್ಕೆ ಸರ್ಕಾರದ ಆದೇಶದಂತೆ ಸದರಿ ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಅನುಷ್ಠಾನಗೊಳಿಸಲು ಸದರಿ ಕಾಮಗಾರಿಯ ಅನುದಾನವನ್ನು ಕಾರ್ಯಪಾಲಕ ಅಭಿಯಂತರರು, ತಾಲ್ಲೂಕು ಪಂಚಾಯತಿ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ ಇವರಿಗೆ ವರ್ಗಾಯಿಸದೇ ಹಾಗೂ ಮೇಲಾಧಿಕಾರಿಗಳ ಆದೇಶವನ್ನು ಪರಿಪಾಲಿಸದೇ ನಿರ್ಲಕ್ಷಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪವೆಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು ನಿಯಮ 1957ರ ನಿಯಮ 10(1)(ಡಿ)ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಅಮಾನತ್ತುಗೊಳಿಸಿದೆ.

-

ಅಮಾನತ್ತುಗೊಂಡಿರುವ ಮೇಲಿನ ಅಧಿಕಾರಿಯವರು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

ಸದರಿಯವರು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲವೆಂದು ತಿಳಿಸಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು**
**ಅವರ ಹೆಸರಿನಲ್ಲಿ**

(ಡಿ.ಎಸ್. ವಿಜಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ &ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
3) ಸಂಬಂಧಿಸಿದ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ)
3) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು.
4) ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ.

**ಪ್ರತಿಯನ್ನು,**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು. ಅರಣ್ಯ ಪರಿಸರ ಮತ್ತು ಜೀವಿ ಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅಪಂ.ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.